21-11-2022
UDAYAVANI - MANIPAL

# ವಿಶ್ವ ಆ್ಯಂಟಿಮೈಕ್ರೊಬಿಯಲ್ ಜಾಗೃತಿ ಸಪ್ತಾಹ: ಸೈಕಲ್ ಜಾಥಾ

**ಮಣಿಪಾಲ, ನ. 20:** ವಿಶ್ವ ಆ್ಯಂಟಿಮೈಕ್ರೊಬಿಯಲ್ ಜಾಗೃತಿ ಸಪ್ತಾಹದ ಅಂಗವಾಗಿ ಸಮುದಾಯದಲ್ಲಿ ಜಾಗೃತಿ ಮೂಡಿಸಲು ರವಿವಾರ ಸೈಕಲ್ ಜಾಥಾ ನಡೆಸಲಾಯಿತು.

ಕಸ್ತೂರ್ಬಾ ಆಸ್ಪತ್ರೆಯ ಹೊರರೋಗಿ ವಿಭಾಗದ ಮುಂಭಾಗದಲ್ಲಿ ಮಾಹೆ ವಿ.ವಿ. ಕುಲಪತಿ ಲೆ|ಜ| ಡಾ| ಎಂ.ಡಿ. ವೆಂಕಟೇಶ್ ಚಾಲನೆ ನೀಡಿದರು. ಮಹಾರಾಷ್ಟ್ರ ನಾಶಿಕ್‌ನ ಆರೋಗ್ಯ ವಿಜ್ಞಾನ ವಿ.ವಿ. ಉಪಕುಲಪತಿ ಲೆ| ಜ| ಡಾ| ಮಾಧುರಿ ಕಾನಿಟ್ಕರ್, ಕೆಎಂಸಿ ಡೀನ್ ಡಾ| ಶರತ್ ಕುಮಾರ್ ರಾವ್, ಸಹಡೀನ್ ಡಾ| ಚಿರೊಂಜೋಯ್ ಮುಖೋಪಾಧ್ಯಾಯ್, ಉಡುಪಿ ಡಾ| ಟಿಎಂಎ ಪೈ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ| ಶಶಿಕಿರಣ್, ಡಾ| ವಂದನಾ, ಡಾ| ಮುರಳೀಧರ್ ವರ್ಮ ಉಪಸ್ಥಿತರಿದ್ದರು.



100ಕ್ಕೂ ಹೆಚ್ಚು ಜನರು ಭಾಗವಹಿಸಿದ್ದ ಜಾಥಾವು ಕಸ್ತೂರ್ಬಾ ಆಸ್ಪತ್ರೆಯಿಂದ ಆರಂಭಗೊಂಡು ಡಾ| ಟಿಎಂಎ ಪೈ ಆಸ್ಪತ್ರೆಯ ಮೂಲಕ ಐಎಂಎ ಭವನ ತಲುಪಿತು.

ವಿಜಯವಾಣಿ

ಭಾನುವಾರ 20 ನವೆಂಬರ್ 2022
20 NOVEMBER 2022

# ಇಂದು ಮಣಿಪಾಲದಲ್ಲಿ ಸೈಕಲ್ ಜಾಥಾ

**ಉಡುಪಿ:** ಆ್ಯಂಟಿಮೈಕ್ರೊಬಿಯಲ್ ರೆಸಿಸ್ಟೆನ್ಸ್ ವಿರುದ್ಧ ಸಾರ್ವಜನಿಕರು, ವೈದ್ಯರು, ಔಷಧ ವಿತರಕರು, ಪಶುವೈದ್ಯರು ಮತ್ತು ಆರೋಗ್ಯ ಕಾರ್ಯಕರ್ತರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಭಾರತೀಯ ವೈದ್ಯರ ಸಂಘ(ಐಎಂಎ) ಹಾಗೂ ಮಣಿಪಾಲ ಕಸ್ತೂರ್ಬಾ ಆಸ್ಪತ್ರೆ, ಡಾ.ಟಿಎಂಎ ಪೈ ಆಸ್ಪತ್ರೆ, ಸೈಕ್ಲಿಂಗ್ ಕ್ಲಬ್‌ಗಳ ಸಹಯೋಗದಲ್ಲಿ ನ.20ರಂದು ಸೈಕಲ್ ಜಾಥಾ ಆಯೋಜಿಸಲಾಗಿದೆ ಎಂದು ಡಾ. ಟಿಎಂಎ ಪೈ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ. ಶಶಿಕಿರಣ್ ಉಮಾಕಾಂತ್ ಶನಿವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

**» ಡಾ.ಶಶಿಕಿರಣ್ ಉಮಾಕಾಂತ್ ಸುದ್ದಿಗೋಷ್ಠಿ**

ಬೆಳಗ್ಗೆ 6.45ಕ್ಕೆ ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆ ಹೊರರೋಗಿ ವಿಭಾಗದ ಮುಂಭಾಗದಲ್ಲಿ ಮಾಹೆ ಮಣಿಪಾಲದ ಉಪಕುಲಪತಿ ಲೆಫ್ಟಿನೆಂಟ್ ಜನರಲ್‌ಎಂ.ಡಿ.ವೆಂಕಟೇಶ್ ಜಾಥಾಕ್ಕೆ ಚಾಲನೆ ನೀಡಲಿದ್ದಾರೆ. ಸಪ್ತಾಹ ಅಂಗವಾಗಿ ವೈದ್ಯಕೀಯ ಸಿಬ್ಬಂದಿ ಹಾಗೂ ಔಷಧವಿತರಕರಿಗೆ ಕಾರ್ಯಾಗಾರ ಆಯೋಜಿಸಲಾಗಿದೆ. ಈ ಮೂಲಕ ಆ್ಯಂಟಿಬಯೋಟಿಕ್‌ಗಳ ಸರಿಯಾದ ವಿತರಣಾ ಕ್ರಮಗಳ ಬಗ್ಗೆ ಅರಿವು ಮೂಡಿಸಲಾಗುವುದು ಎಂದರು.

2019ರಲ್ಲಿ ಆ್ಯಂಟಿಮೈಕ್ರೊಬಿಯಲ್ ಪ್ರತಿರೋಧದ ಸಾವುಗಳು ಜಗತ್ತಿನಾದ್ಯಂತ 1.27 ಮಿಲಿಯನ್‌ನಷ್ಟಿದ್ದು, ವಿಶ್ವ ಆ್ಯಂಟಿ ಮೈಕ್ರೊಬಿಯಲ್ ಪ್ರತಿರೋಧಕ ಜಾಗೃತಿ ಸಪ್ತಾಹ ಮೂಲಕ ವಿಶ್ವ ಆರೋಗ್ಯ ಸಂಸ್ಥೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುತ್ತಿದೆ ಎಂದರು. ಕೆಎಂಸಿ ಡೀನ್ ಡಾ. ಚಿರೊಂಜಯ್ ಮುಖ್ಯೋಪಾಧ್ಯಾಯ, ಮೈಕ್ರೋಬಯಾಲಾಜಿ ಮುಖ್ಯಸ್ಥೆ ಡಾ.ವಂದನಾ, ಡಾ. ಮಾಧವ ರಾವ್, ಐಎಂಎ ಉಪಾಧ್ಯಕ್ಷ ಡಾ.ವಿಜಯಕುಮಾರ್ ಶೇಟ್ ಉಪಸ್ಥಿತರಿದ್ದರು.

ಕನ್ನಡಪ್ರಭ
ಸೋಮವಾರ 21.11.2022

# ಮಣಿಪಾಲ: ಆಂಟಿಮೈಕ್ರೊಬಿಯಲ್ ಜಾಗೃತಿಗಾಗಿ ಸೈಕಲ್ ಜಾಥಾ




ಮಣಿಪಾಲದಲ್ಲಿ ಕಸ್ತೂರ್ಬಾ ಆಸ್ಪತ್ರೆಯ ವತಿಯಿಂದ ಆಂಟಿಮೈಕ್ರೊಬಿಯಲ್ ಜಾಗೃತಿಗಾಗಿ ಸೈಕಲ್ ಜಾಥಾ ನಡೆಯಿತು.

• **ಕನ್ನಡಪ್ರಭ ವಾರ್ತೆ** ಮಣಿಪಾಲ

ವಿಶ್ವ ಆಂಟಿಮೈಕ್ರೊಬಿಯಲ್ ಜಾಗೃತಿ ಸಪ್ತಾಹ 2022ರ ಅಂಗವಾಗಿ ಸಮುದಾಯದಲ್ಲಿ ಜಾಗೃತಿ ಮೂಡಿಸಲು ಭಾನುವಾರ ಇಲ್ಲಿನ ಕಸ್ತೂರ್ಬಾ ಆಸ್ಪತ್ರೆಯ ವತಿಯಿಂದ ಸೈಕಲ್ ಜಾಥಾ ನಡೆಯಿತು.

ಆಸ್ಪತ್ರೆಯ ಹೊರರೋಗಿ ವಿಭಾಗದ ಮುಂಭಾಗದಲ್ಲಿ ಮಾಹೆಯ ಉಪಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ) ಎಂ.ಡಿ. ವೆಂಕಟೇಶ್ ಜಾಥಾಕ್ಕೆ ಚಾಲನೆ ನೀಡಿದರು. ಮಹಾರಾಷ್ಟ್ರ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ, ನಾಸಿಕ್ ಇಲ್ಲಿನ ಉಪಕುಲಪತಿ ಲೆ. ಜ. (ಡಾ) ಮಾಧುರಿ ಕಾನಿಟ್ಕರ್, ಕೆ.ಎಂ.ಸಿ. ಡೀನ್ ಡಾ. ಶರತ್ ಕುಮಾರ್ ರಾವ್, ಸಹ ಡೀನ್ ಡಾ. ಚಿರೊಂಜೋಯ್ ಮುಖ್ಯೋಪಾಧ್ಯಾಯ, ಡಾ.ಟಿ.ಎಂ.ಎ. ಪೈ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಶಶಿಕಿರಣ್, ಡಾ. ವಂದನಾ, ಡಾ. ಮುರಳೀಧರ್ ವರ್ಮ ಮತ್ತಿತರರು ಉಪಸ್ಥಿತರಿದ್ದರು.

ಜಾಥಾದಲ್ಲಿ 100ಕ್ಕೂ ಹೆಚ್ಚು ಜನರು ಸೈಕಲ್ ನೊಂದಿಗೆ ಭಾಗವಹಿಸಿದ್ದರು. ಕಸ್ತೂರ್ಬಾ ಆಸ್ಪತ್ರೆಯಿಂದ ಆರಂಭಗೊಂಡು ಉಡುಪಿಯ ಡಾ.ಟಿ.ಎಂ.ಎ.ಪೈ ಆಸ್ಪತ್ರೆ ಮೂಲಕ ಬ್ರಹ್ಮಗಿರಿಯ ಐ.ಎಂ.ಎ. ಭವನ ತಲುಪಿತು.

ಪ್ರಜಾವಾಣಿ
ಸೋಮವಾರ • ನವೆಂಬರ್ 21, 2022

# ವಿಶ್ವ ಆ್ಯಂಟಿ ಮೈಕ್ರೊಬಿಯಲ್ ಜಾಗೃತಿ ಸಪ್ತಾಹ

## ಆಂಟಿ ಬಯೋಟಿಕ್ ಬಳಕೆಯಲ್ಲಿ ಎಚ್ಚರ ಇರಲಿ: ಡಾ.ಶಶಿಕಿರಣ್ ಉಮಾಕಾಂತ್

ಪ್ರಜಾವಾಣಿ ವಾರ್ತೆ

ಉಡುಪಿ: ಮಣಿಪಾಲದ ಕಸ್ತೂರಬಾ ಆಸ್ಪತ್ರೆ, ಉಡುಪಿಯ ಡಾ.ಟಿಎಂಎ ಪೈ ಆಸ್ಪತ್ರೆ ಹಾಗೂ ಭಾರತೀಯ ವೈದ್ಯರ ಸಂಘದ ಸಹಯೋಗದಲ್ಲಿ ಆ್ಯಂಟಿ ಮೈಕ್ರೊಬಿಯಲ್ ಪ್ರತಿರೋಧದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ನ.24ರವರೆಗೆ ಜಾಗೃತಿ ಸಪ್ತಾಹ ಹಮ್ಮಿಕೊಳ್ಳಲಾಗಿದೆ ಎಂದು ಡಾ.ಟಿಎಂಎ ಪೈ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಶಶಿಕಿರಣ್ ಉಮಾಕಾಂತ್ ತಿಳಿಸಿದರು.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 20ನೇ ಶತಮಾನದ ಆರಂಭದಲ್ಲಿ ಬಳಕೆಗೆ ಬಂದ ಆ್ಯಂಟಿ ಬಯಾಟಿಕ್ ಔಷಧಗಳು ರೋಗಿಗಳ ಜೀವಗಳನ್ನು ಉಳಿಸುವಲ್ಲಿ ಪ್ರಮುಖ ಪಾತ್ರ ವಹಿಸಿದವು. ಮನುಷ್ಯನ ಜೀವಿತಾವಧಿ ಹೆಚ್ಚಾಯಿತು. ವೈದ್ಯಕೀಯ ರಂಗದಲ್ಲಿ ಕ್ರಾಂತಿಯೇ ಉಂಟಾಯಿತು.

ಆದರೆ, ಈಚೆಗೆ ಆ್ಯಂಟಿ ಬಯಾಟಿಕ್ ಔಷಧಗಳ ಅತಿಯಾದ ಬಳಕೆ ಹಾಗೂ ವೈದ್ಯರ ಸಲಹೆ ಇಲ್ಲದೆ ರೋಗಿಗಳು ತೆಗೆದುಕೊಳ್ಳುತ್ತಿರುವ ಪರಿಣಾಮ ಮನುಷ್ಯನ ಪ್ರಾಣಕ್ಕೆ ಕುತ್ತು ಬಂದಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಸಿಟಿ ಆಸ್ಪತ್ರೆಯ ಡಾ.ವಿಜಯ್ ಕುಮಾರ್ ಶೇಟ್ ಮಾತನಾಡಿ, ಕೆಲವು ರೋಗಿಗಳು ಇಂಟರ್‌ನೆಟ್‌ನಲ್ಲಿ ರೋಗಕ್ಕೆ ಆ್ಯಂಟಿ ಬಯೋಟಿಕ್ ಮದ್ದು ಹುಡುಕಿ ಸೇವಿಸುತ್ತಿದ್ದಾರೆ. ಸಾಮಾನ್ಯವಾಗಿ ಹಲವು ರೋಗಗಳ ಲಕ್ಷಣಗಳು ಒಂದೇ ರೀತಿ ಇರುವುದರಿಂದ ವೈದ್ಯರ ಸಲಹೆ ಇಲ್ಲದೆ ನೇರವಾಗಿ ಮದ್ದು ತೆಗೆದುಕೊಂಡರೆ ದೇಹದ ಮೇಲೆ ಗಂಭೀರ ಪರಿಣಾಮ ಬೀರಲಿದೆ ಎಂದು ತಿಳಿಸಿದರು.

ಮೈಕ್ರೋ ಬಯಾಲಜಿ ವಿಭಾಗದ ಮುಖ್ಯಸ್ಥೆ ಡಾ.ವಂದನಾ ಮಾತನಾಡಿ, ನಿಯಮಿತವಾಗಿ ಆಸ್ಪತ್ರೆಗೆ ಭೇಟಿನೀಡದ ರೋಗಿಗಳ ದೇಹದಲ್ಲೂ ಆ್ಯಂಟಿ ಬಯೋಟಿಕ್‌ಗಳ ಅಂಶ ಪತ್ತೆಯಾಗುತ್ತಿರುವುದು ಆತಂಕಕಾರಿ ವಿಚಾರ. ಆ್ಯಂಟಿ ಬಯಾಟಿಕ್‌ಗಳ ದುರ್ಬಳಕೆ ಇದಕ್ಕೆ ಪ್ರಮುಖ ಕಾರಣ.

ಸುದ್ದಿಗೋಷ್ಠಿಯಲ್ಲಿ ಕೆಎಂಸಿ ಸಹಾಯಕ ಡೀನ್ ಡಾ.ಚಿರೊಂಜಯ್ ಮುಖ್ಯೋಪಾಧ್ಯಾಯ, ಡಾ.ಮಹದೇವ್ ರಾವ್ ಇದ್ದರು.



ವಿಶ್ವ ಆ್ಯಂಟಿ ಮೈಕ್ರೊಬಿಯಲ್ ಜಾಗೃತಿ ಸಪ್ತಾಹದ ಅಂಗವಾಗಿ ಭಾನುವಾರ ಮಣಿಪಾಲದ ಕಸ್ತೂರಬಾ ಆಸ್ಪತ್ರೆಯ ಹೊರರೋಗಿ ವಿಭಾಗದ ಮುಂಭಾಗ ಮಾಹೆ ಕುಲಪತಿ ಡಾ.ಎಂ.ಡಿ. ವೆಂಕಟೇಶ್ ಸೈಕಲ್ ಜಾಥಾಗೆ ಚಾಲನೆ ನೀಡಿದರು

### ಸೈಕಲ್ ಜಾಥಾ

ಉಡುಪಿ: ವಿಶ್ವ ಆ್ಯಂಟಿ ಮೈಕ್ರೊಬಿಯಲ್ ಜಾಗೃತಿ ಸಪ್ತಾಹದ ಅಂಗವಾಗಿ ಭಾನುವಾರ ಮಣಿಪಾಲದ ಕಸ್ತೂರಬಾ ಆಸ್ಪತ್ರೆಯ ಹೊರರೋಗಿ ವಿಭಾಗದ ಮುಂಭಾಗ ಸೈಕಲ್ ಜಾಥಾಗೆ ಮಾಹೆ ಕುಲಪತಿ ಡಾ.ಎಂ.ಡಿ. ವೆಂಕಟೇಶ್ ಚಾಲನೆ ನೀಡಿದರು.

ಮಹಾರಾಷ್ಟ್ರ ಆರೋಗ್ಯ ವಿಜ್ಞಾನ ವಿವಿ ಕುಲಪತಿ ಡಾ.ಮಾಧುರಿ ಕಾನಿಟ್ಕರ್, ಕೆಎಂಸಿ ಡೀನ್ ಡಾ.ಶರತ್ ಕುಮಾರ್ ರಾವ್, ಸಹ ಡೀನ್ ಡಾ.ಚಿರೊಂಜೋಯ್ ಮುಖ್ಯಪಾಧ್ಯಾಯ್, ಡಾ.ಟಿಎಂಎ ಪೈ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಶಶಿಕಿರಣ್, ಡಾ.ವಂದನಾ, ಡಾ ಮುರಳಿಧರ್ ವರ್ಮ ಇದ್ದರು.

ಜಾಥಾದಲ್ಲಿ 100ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದರು.

ವಿಜಯ ಕರ್ನಾಟಕ

ಭಾನುವಾರ,20 ನವೆಂಬರ್ 2022, ಮಂಗಳೂರು

# ಇಂದು ಜಾಗೃತಿಗಾಗಿ ಸೈಕಲ್ ಜಾಥಾ

■ **ವಿಕ ಸುದ್ದಿಲೋಕ** ಉಡುಪಿ

ಆ್ಯಂಟಿ ಮೈಕ್ರೊಬಿಯಲ್ ರೆಸಿಸ್ಟೆನ್ಸ್ ವಿರುದ್ಧದ ಸಾರ್ವಜನಿಕರು, ವೈದ್ಯರು, ಔಷಧಿಕಾರರು, ಪಶುವೈದ್ಯರು ಮತ್ತು ಆರೋಗ್ಯ ಕಾರ್ಯಕರ್ತರಲ್ಲಿ ಜಾಗೃತಿ ಮೂಡಿಸುವ ಉದ್ದೇಶ ಇಟ್ಟುಕೊಂಡಿದ್ದು, ನ.18ರಿಂದ 24ರ ವರೆಗೆ ಜಾಗೃತಿ ಸಪ್ತಾಹ ಹಮ್ಮಿಕೊಳ್ಳಲಾಗಿದೆ. ನ.20ರಂದು ಜಾಗೃತಿಗಾಗಿ ಸೈಕಲ್ ಜಾಥಾವನ್ನು ನಡೆಯಲಿದೆ ಎಂದು ಡಾ. ಟಿಎಂಎ ಪೈ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ. ಶಶಿಕಿರಣ್ ಉಮಾಕಾಂತ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಮಣಿಪಾಲ ಅಕಾಡೆಮಿ ಆಫ್ ಹೈಯರ್ ಎಜುಕೇಶನ್ (ಮಾಹೆ), ಮಣಿಪಾಲವು ಸಮುದಾಯ ಮತ್ತು ಸಂಬಂಧಿತರಲ್ಲಿ ಜಾಗೃತಿ ಮೂಡಿಸಲು ಹಲವಾರು ಚಟುವಟಿಕೆಗಳೊಂದಿಗೆ ಈ ಪ್ರಯತ್ನಗಳಿಗೆ ಕೈ ಜೋಡಿಸಲಿದೆ. ಸೆಂಟರ್ ಫಾರ್ ಆ್ಯಂಟಿ ಮೈಕ್ರೊಬಿಯಲ್ ರೆಸಿಸ್ಟೆನ್ಸ್ ಆ್ಯಂಡ್ ಎಜುಕೇಶನ್‌ನಡಿಯಲ್ಲಿ ಆಂಟಿಮೈಕ್ರೊಬಿಯಲ್ ಪ್ರತಿರೋಧಕವನ್ನು ಎದುರಿಸಲು ಚಟುವಟಿಕೆಗಳ ಮುಖ್ಯಸ್ಥರಿರುವ ತಜ್ಞರ ಗುಂಪನ್ನು ಸಂಸ್ಥೆ ಹೊಂದಿದೆ. ಈ ವರ್ಷ ಕೇಂದ್ರವು ಮಣಿಪಾಲ- ಬಯೋಮೆರಿಯಕ್ಸ್ ಸೆಂಟರ್ ಆಫ್ ಎಕ್ಸಲೆನ್ಸ್ ಇನ್ ಆಂಟಿಮೈಕ್ರೊಬಿಯಲ್ ರೆಸಿಸ್ಟೆನ್ಸ್ ಜತೆಗೆ ಭಾರತೀಯ ವೈದ್ಯಕೀಯ ಸಂಘ, ಉಡುಪಿ-ಕರಾವಳಿ ಮತ್ತು ಪ್ರಮುಖ ಸೈಕ್ಲಿಂಗ್ ಕ್ಲಬ್‌ಗಳಾದ ರೈಡ್ ಫಾರ್ ಹೆಲ್ತ್ ಮತ್ತು ಉಡುಪಿ ಸೈಕ್ಲಿಂಗ್ ಕ್ಲಬ್‌ನೊಂದಿಗೆ ಕೈ ಜೋಡಿಸಿ ಜಾಗೃತಿ ಸರಣಿ ಚಟುವಟಿಕೆಗಳನ್ನು ಆಯೋಜಿಸುತ್ತಿದೆ.

ನ.20ರಂದು ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ಹೊರರೋಗಿ ವಿಭಾಗದ ಮುಂಭಾಗದಲ್ಲಿ ಆರಂಭಗೊಳ್ಳುವ ಸೈಕಲ್ ಜಾಥಾಕ್ಕೆ ಮಾಹೆ ಮಣಿಪಾಲದ ಉಪಕುಲಪತಿ ಲೆಫ್ಟಿನೆಂಟ್ ಜನರಲ್ ಡಾ.ಎಂ.ಡಿ. ವೆಂಕಟೇಶ್ ಬೆಳಗ್ಗೆ 6.45ಕ್ಕೆ ಚಾಲನೆ ನೀಡಲಿದ್ದಾರೆ. ಜಾಥಾ ಐಎಂಎ ಭವನದವರೆಗೆ ಸಾಗಿಬರಲಿದೆ ಎಂದರು.

ಈ ವಾರದಲ್ಲಿ ವೈದ್ಯಕೀಯ ಔಷಧಿಕಾರರಿಗೆ ಕಾರ್ಯಾಗಾರ ಆಯೋಜಿಸಲಾಗಿದೆ. ಈ ಕಾರ್ಯಕ್ರಮ ಆಂಟಿಬಯೋಟಿಕ್‌ಗಳ ಸರಿಯಾದ ವಿತರಣೆ ಅಭ್ಯಾಸಗಳ ಪ್ರಾಮುಖ್ಯತೆ ಬಗ್ಗೆ ಅವರಿಗೆ ಶಿಕ್ಷಣ ನೀಡಲಿದೆ. ವೈದ್ಯರ ಔಷಧ ಚೀಟಿ ಇಲ್ಲದೆ ಔಷಧಾಲಯಗಳಿಂದ ಪ್ರತಿಜೀವಕಗಳನ್ನು ಖರೀದಿಸಬಾರದು. ಹಿಂದಿನ ಉಳಿದ ಪ್ರತಿಜೀವಕಗಳನ್ನು ತೆಗೆದುಕೊಳ್ಳಬಾರದು. ಉಳಿದಿರುವ ಪ್ರತಿಜೀವಕಗಳನ್ನು ಸರಿಯಾಗಿ ವಿಲೇವಾರಿ ಮಾಡಬೇಕೆಂದರು. ವೈದ್ಯರಾದ ಡಾ. ಚಿರೊಂಜಯ ಮುಖ್ಯೋಪಾಧ್ಯಾಯ, ಸಿಟಿ ಆಸ್ಪತ್ರೆ ಡಾ. ವಿಜಯ್ ಕುಮಾರ್ ಶೇಟ್, ಡಾ. ವಂದನಾ, ಡಾ. ಮಾಧವ ರಾವ್ ಉಪಸ್ಥಿತರಿದ್ದರು.

# ವಿಶ್ವ ಆಂಟಿಮೈಕ್ರೊಬಿಯಲ್ ಜಾಗೃತಿ- ಸೈಕಲ್ ಜಾಥಾ

By **Udupi Bulletin News Desk** - November 20, 2022 0



**ಮಣಿಪಾಲ:** ವಿಶ್ವ ಆಂಟಿಮೈಕ್ರೊಬಿಯಲ್ ಜಾಗೃತಿ ಸಪ್ತಾಹ 2022ರ ಅಂಗವಾಗಿ ಭಾನುವಾರ ಸಮುದಾಯದಲ್ಲಿ ಜಾಗೃತಿ ಮೂಡಿಸಲು ಸೈಕಲ್ ಜಾಥಾ ನಡೆಯಿತು. ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ಹೊರರೋಗಿ ವಿಭಾಗದ ಮುಂಭಾಗದಲ್ಲಿ ಮಾಹೆ ಮಣಿಪಾಲದ ಉಪಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ) ಎಂ.ಡಿ.ವೆಂಕಟೇಶ್ ಅವರು ಚಾಲನೆ ನೀಡಿದರು.



ಮಹಾರಾಷ್ಟ್ರ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ, ನಾಶಿಕ್ ಇಲ್ಲಿನ ಉಪಕುಲಪತಿ ಲೆ. ಜ. (ಡಾ.) ಮಾಧುರಿ ಕಾನಿಟ್ಕರ್, ಕೆಎಂಸಿ ಡೀನ್ ಡಾ. ಶರತ್ ಕುಮಾರ್ ರಾವ್, ಸಹ ಡೀನ್ ಡಾ. ಚಿರೊಂಜೋಯ್ ಮುಖ್ಯೋಪಾಧ್ಯಾಯ್, ಡಾ.ಟಿಎಂಎ ಪೈ ಆಸ್ಪತ್ರೆಯ ವೈದ್ಯಕೀಯ ಅದೀಕ್ಷಕ ಡಾ. ಶಶಿಕಿರಣ್, ಡಾ. ವಂದನಾ, ಡಾ. ಮುರಳಿಧರ್ ವರ್ಮ ಮತ್ತಿತರರು ಉಪಸ್ಥಿತರಿದ್ದರು.

ಜಾಥಾದಲ್ಲಿ 100 ಕ್ಕೂ ಹೆಚ್ಚು ಜನರು ಸೈಕಲ್ ನೊಂದಿಗೆ ಭಾಗವಹಿಸಿದ್ದರು. ಕಸ್ತೂರ್ಬಾ ಆಸ್ಪತ್ರೆಯಿಂದ ಆರಂಭಗೊಂಡು ಡಾ.ಟಿಎಂಎ ಪೈ ಆಸ್ಪತ್ರೆ ಮೂಲಕ ಐಎಂಎ ಭವನ ತಲುಪಿತು.

# ವಿಶ್ವ ಆಂಟಿಮೈಕ್ರೊಬಿಯಲ್ ಜಾಗೃತಿ ಸಪ್ತಾಹ 2022

November 20, 2022 66 No Comment




ವಿಶ್ವ ಆಂಟಿಮೈಕ್ರೊಬಿಯಲ್ ಜಾಗೃತಿ ಸಪ್ತಾಹ 2022ರ ಅಂಗವಾಗಿ ನವೆಂಬರ್ 20, 2022 ರ ಭಾನುವಾರದಂದು, ಸಮುದಾಯದಲ್ಲಿ ಜಾಗೃತಿ ಮೂಡಿಸಲು ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ಹೊರರೋಗಿ ವಿಭಾಗದ ಮುಂಭಾಗದಲ್ಲಿ 'ಸೈಕಲ್ ಜಾಥಾ' ನಡೆಯಿತು.



ಮಾಹೆ ಮಣಿಪಾಲದ ಉಪಕುಲಪತಿ, ಲೆಫ್ಟಿನೆಂಟ್ ಜನರಲ್ (ಡಾ) ಎಂ. ಡಿ. ವೆಂಕಟೇಶ್ ಅವರು ಈ ಜಾಥಕ್ಕೆ ಚಾಲನೆ ನೀಡಿದರು. ಮಹಾರಾಷ್ಟ್ರ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ, ನಾಶಿಕ್ ಇಲ್ಲಿನ ಉಪಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ ) ಮಾಧುರಿ ಕಾನಿಟ್ಕರ್, ಕೆ ಎಂ ಸಿ ಡೀನ್ ಡಾ. ಶರತ್ ಕುಮಾರ್ ರಾವ್, ಸಹ ಡೀನ್ ಡಾ. ಚಿರೊಂಜೋಯ್ ಮುಖ್ಯೋಪಾಧ್ಯಾಯ್, ಡಾ. ಟಿ ಎಂ ಎ ಪೈ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಶಶಿಕಿರಣ್, ಡಾ. ವಂದನಾ, ಡಾ. ಮುರಳೀಧರ್ ವರ್ಮ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



ಜಾಥಾದಲ್ಲಿ 100ಕ್ಕೂ ಹೆಚ್ಚು ಜನರು ಸೈಕಲ್ ನೊಂದಿಗೆ ಭಾಗವಹಿಸಿದ್ದರು. ಕಸ್ತೂರ್ಬಾ ಆಸ್ಪತ್ರೆಯಿಂದ ಆರಂಭಗೊಂಡು ಡಾ. ಟಿ ಎಂ ಎ ಪೈ ಆಸ್ಪತ್ರೆ ಮೂಲಕ ಐ ಎಂ ಎ ಭವನ ತಲುಪಿ ಮುಕ್ತಾಯಗೊಂಡಿತು.

ಸುದ್ದಿ

# ವಿಶ್ವ ಆಂಟಿಮೈಕ್ರೊಬಿಯಲ್ ಜಾಗೃತಿ ಸಪ್ತಾಹ 2022

*By Janardhan Kodavoor/Team karavalixpress, November 20, 2022*




ವಿಶ್ವ ಆಂಟಿಮೈಕ್ರೊಬಿಯಲ್ ಜಾಗೃತಿ ಸಪ್ತಾಹ 2022ರ ಅಂಗವಾಗಿ ಇಂದು ಸಮುದಾಯದಲ್ಲಿ ಜಾಗೃತಿ ಮೂಡಿಸಲು ಸೈಕಲ್ ಜಾಥಾ ನಡೆಯಿತು. ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ಹೊರರೋಗಿ ವಿಭಾಗದ ಮುಂಭಾಗದಲ್ಲಿ ಮಾಹೆ ಮಣಿಪಾಲದ ಉಪಕುಲಪತಿ, ಲೆಫ್ಟಿನೆಂಟ್ ಜನರಲ್ (ಡಾ) ಎಂ.ಡಿ.ವೆಂಕಟೇಶ್ ಅವರು ಚಾಲನೆ ನೀಡಿದರು.



ಮಹಾರಾಷ್ಟ್ರ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ, ನಾಶಿಕ್ ಇಲ್ಲಿನ ಉಪಕುಲಪತಿ ಲೆ. ಜ. (ಡಾ ) ಮಾಧುರಿ ಕಾನಿಟ್ಕರ್, ಕೆ ಎಂ ಸಿ ಡೀನ್ ಡಾ ಶರತ್ ಕುಮಾರ್ ರಾವ್, ಸಹ ಡೀನ್ ಡಾ ಚಿರೊಂಜೋಯ್ ಮುಖ್ಯೋಪಾಧ್ಯಾಯ್, ಡಾ ಟಿ ಎಂ ಎ ಪೈ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಶಶಿಕಿರಣ್, ಡಾ ವಂದನಾ, ಡಾ ಮುರಳೀಧರ್ ವರ್ಮ ಮತ್ತಿತರರು ಉಪಸ್ಥಿತರಿದ್ದರು.



ಜಾಥಾದಲ್ಲಿ 100 ಕ್ಕೂ ಹೆಚ್ಚು ಜನರು ಸೈಕಲ್ ನೊಂದಿಗೆ ಭಾಗವಹಿಸಿದ್ದರು. ಕಸ್ತೂರ್ಬಾ ಆಸ್ಪತ್ರೆಯಿಂದ ಆರಂಭಗೊಂಡು ಡಾ .ಟಿಎಂಎ ಪೈ ಆಸ್ಪತ್ರೆ ಮೂಲಕ ಐಎಂಎ ಭವನ ತಲುಪಿತು.

ROOTS INSTITUTE
ized SAP Trai



ಆರೋಗ್ಯ

# ವಿಶ್ವ ಆಂಟಿಮೈಕ್ರೊಬಿಯಲ್ ಜಾಗೃತಿ ಮೂಡಿಸಲು ಸೈಕಲ್ ಜಾಥಾ

2 weeks ago



Spread the love

ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ಹೊರರೋಗಿ ವಿಭಾಗದ ಮುಂಭಾಗದಲ್ಲಿ ಮಾಹೆ ಮಣಿಪಾಲದ ಉಪಕುಲಪತಿ, ಲೆಫ್ಟಿನೆಂಟ್ ಜನರಲ್ (ಡಾ) ಎಂ.ಡಿ.ವೆಂಕಟೇಶ್ ಅವರು ಚಾಲನೆ ನೀಡಿದರು. ಮಹಾರಾಷ್ಟ್ರ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ, ನಾಶಿಕ್ ಇಲ್ಲಿನ ಉಪಕುಲಪತಿ ಲೆ. ಜ. (ಡಾ ) ಮಾಧುರಿ ಕಾನಿಟ್ಕರ್, ಕೆ ಎಂ ಸಿ ಡೀನ್ ಡಾ ಶರತ್ ಕುಮಾರ್ ರಾವ್, ಸಹ ಡೀನ್ ಡಾ ಚಿರೊಂಜೋಯ್ ಮುಖ್ಯಪಾಧ್ಯಾಯ್, ಡಾ ಟಿ ಎಂ ಎ ಪೈ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಶಶಿಕಿರಣ್, ಡಾ ವಂದನಾ, ಡಾ ಮುರಳಿಧರ್ ವರ್ಮ ಮತ್ತಿತರರು ಉಪಸ್ಥಿತರಿದ್ದರು. ಜಾಥಾ ದಲ್ಲಿ 100 ಕ್ಕೂ ಹೆಚ್ಚು ಜನರು ಸೈಕಲ್ ನೊಂದಿಗೆ ಭಾಗವಹಿಸಿದ್ದರು. ಕಸ್ತೂರ್ಬಾ ಆಸ್ಪತ್ರೆಯಿಂದ ಆರಂಭಗೊಂಡು ಡಾ ಟಿ ಎಂ ಎ ಪೈ ಆಸ್ಪತ್ರೆ ಮೂಲಕ ಐ ಎಂ ಎ ಭವನ ತಲುಪಿತು.







**Other links:**

**You-tube**: [https://youtu.be/bkSTGsVII3A](https://youtu.be/bkSTGsVII3A)